## ವಿಧಾನ ಸಭೆ

| | |
|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | 344 |
| **ಮಾನ್ಯ ಸದಸ್ಯರ ಹೆಸರು** | ಶ್ರೀ. ಪುಟ್ಟರಂಗಶೆಟ್ಟಿ .ಸಿ. (ಚಾಮರಾಜನಗರ) |
| **ಉತ್ತರಿಸಬೇಕಾದ ದಿನಾಂಕ** | 06-03-2025 |
| **ಉತ್ತರಿಸುವವರು** | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಚಾಮರಾಜನಗರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ವಿವಿಧ ಬಗೆಯ ಸರ್ಕಾರಿ ಆಸ್ಪತ್ರೆಗಳು ಯಾವುವು; ಸದರಿ ಆಸ್ಪತ್ರೆಗಳು ಯಾವ ಯಾವ ಸೌಲಭ್ಯಗಳನ್ನು ಹೊಂದಿವೆ; (ವಿವರ ಒದಗಿಸುವುದು) | ಚಾಮರಾಜನಗರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿರುವ ವಿವಿಧ ಬಗೆಯ ಸರ್ಕಾರಿ ಆಸ್ಪತ್ರೆಗಳು ಈ ಕೆಳಕಂಡಂತಿವೆ.<br>1. ಪ್ರಾಥಮಿಕ ಆರೋಗ್ಯ ಕೇಂದ್ರಗಳು - 13<br>2. ನಗರ ಆರೋಗ್ಯ ಕೇಂದ್ರ - 01<br>3. ಸಂಚಾರಿ ಆರೋಗ್ಯ ಘಟಕಗಳು - 01<br>4. ನಮ್ಮ ಕ್ಲಿನಿಕ್ - 01<br>5. ಜಿಲ್ಲಾ ಆಸ್ಪತ್ರೆ -01<br>ಸದರಿ ಆಸ್ಪತ್ರೆಗಳಲ್ಲಿ ಲಭ್ಯವಿರುವ ಸೇವೆಗಳ ವಿವರಗಳನ್ನು **ಅನುಬಂಧ**-1 ರಲ್ಲಿ ನೀಡಲಾಗಿದೆ. |
| ಆ) | ಸದರಿ ಆಸ್ಪತ್ರೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು; ಸಿಬ್ಬಂದಿಗಳ ಕೊರತೆ ನೀಗಿಸಲು ಸರ್ಕಾರವು ಕೈಗೊಂಡ ಕ್ರಮಗಳೇನು; | ಚಾಮರಾಜನಗರ ವೈದ್ಯಕೀಯ ವಿಜ್ಞಾನಗಳ ಮತ್ತು ಬೋಧನಾ ಆಸ್ಪತ್ರೆ ಮತ್ತು ಜಿಲ್ಲಾ ಆಸ್ಪತ್ರೆಯ ಸಿಬ್ಬಂದಿಗಳನ್ನು ಹೊರತುಪಡಿಸಿ, ಚಾಮರಾಜನಗರ ವಿಧಾನಸಭಾ ಕ್ಷೇತ್ರಕ್ಕೆ ಒಳಪಡುವ ಆಸ್ಪತ್ರೆಗಳಲ್ಲಿನ ಸಿಬ್ಬಂದಿಗಳ ವಿವರ ಈ ಕೆಳಕಂಡಂತಿದೆ:<br><br>ಮಂಜೂರಾದ ಹುದ್ದೆಗಳು - 172<br>ಭರ್ತಿಯಾದ ಹುದ್ದೆಗಳು - 54<br>ಖಾಲಿ ಹುದ್ದೆಗಳು - 118<br><br>**ಸಿಬ್ಬಂದಿಗಳ ಕೊರತೆ ನೀಗಿಸಲು ಕೈಗೊಂಡ ಕ್ರಮಗಳು:**<br>ಇಲಾಖೆಯಲ್ಲಿ ಉಳಿಕೆ ಮೂಲ ವೃಂದದಲ್ಲಿ ಖಾಲಿ ಇರುವ ಈ ಕೆಳಕಂಡ ಅರೆ ವೈದ್ಯಕೀಯ ಹುದ್ದೆಗಳನ್ನು ಭರ್ತಿ ಮಾಡಲು ಸಂಖ್ಯೆ: ಹೆಚ್‌ಎಫ್‌ಡಬ್ಲ್ಯು 709 ಹೆಚ್‌ಎಸ್‌ಎಂ 2017, 17.05.2022ರಲ್ಲಿ ಅಂತಿಮ ಅಧಿಸೂಚನೆಯನ್ನು ಹೊರಡಿಸಿದ್ದು, ಅದರನ್ವಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯದ ವಿಶೇಷ ನೇಮಕಾತಿ ಸಮಿತಿಯ |

ಅಧಿಸೂಚನೆ ಸಂಖ್ಯೆ:ಎಸ್‌ಆರ್‌ಸಿ/ಆರ್‌ಪಿಸಿ/15/2022-23, ದಿನಾಂಕ:02.09.2022ರಲ್ಲಿ ಈ ಕೆಳಕಂಡ ಹುದ್ದೆಗಳನ್ನು ಅಧಿಸೂಚಿಸಿ, ಎರಡು ಹಂತಗಳಲ್ಲಿ ಅರ್ಹ ಅಭ್ಯರ್ಥಿಗಳ ಮೂಲ ದಾಖಲಾತಿ ಪರಿಶೀಲನಾ ಕಾರ್ಯವು ಪೂರ್ಣಗೊಂಡಿರುತ್ತದೆ.

| ಕ್ರ. ಸಂ. | ಹುದ್ದೆ | ಅಧಿಸೂಚಿಸಿರುವ ಹುದ್ದೆಗಳ ಸಂಖ್ಯೆ |
|---|---|---|
| **ಉಳಿಕೆ ಮೂಲ ವೃಂದ** | | |
| 1 | ಕಿರಿಯ ಪ್ರಯೋಗ ಶಾಲಾ ತಾಂತ್ರಿಕ ಅಧಿಕಾರಿ | 150 |
| 2 | ಫಾರ್ಮಸಿ ಅಧಿಕಾರಿ | 400 |
| 3 | ಕಿರಿಯ ವೈದ್ಯಕೀಯ ವಿಕಿರಣ ಶಾಸ್ತ್ರ, ಚಿತ್ರಣ ಅಧಿಕಾರಿ | 8 |
| | **ಒಟ್ಟು** | **558** |

ಆದೇಶ ಸಂಖ್ಯೆ:ಆಕುಕ 296 ಹೆಚ್‌ಎಸ್‌ಎಂ 2024, ದಿನಾಂಕ:20.02.2025ರಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯದ ವಿಶೇಷ ನೇಮಕಾತಿ ಸಮಿತಿ ಅಧಿಸೂಚನೆ ಸಂಖ್ಯೆ: ಎಸ್‌ಆರ್‌ಸಿ/ಕೆಕೆ/14/2022-23, ದಿನಾಂಕ:24-08-2022 ಮತ್ತು ವಿಶೇಷ ನೇಮಕಾತಿ ಸಮಿತಿ ಅಧಿಸೂಚನೆ ಸಂಖ್ಯೆ:ಎಸ್‌ಆರ್‌ಸಿ/ಆರ್‌ಪಿಸಿ/15/2022-23, ದಿನಾಂಕ: 02-09-2022ಕ್ಕೆ ಮಾತ್ರ ಅನ್ವಯವಾಗುವಂತೆ ಆದೇಶ ಸಂಖ್ಯೆ: ಸಿಆಸುಇ 166 ಸೆನೆನಿ 2024, ದಿನಾಂಕ:10-09-2024 ರಿಂದ ವಿನಾಯಿತಿ ನೀಡಿ ಆದೇಶಿಸಲಾಗಿದೆ ಹಾಗೂ ಸದರಿ ಎರಡು ಅಧಿಸೂಚನೆಗಳಲ್ಲಿನ ವಿವಿಧ ಅರೆ ವೈದ್ಯಕೀಯ ಹುದ್ದೆಗಳನ್ನು ಭರ್ತಿ ಮಾಡಲು ಈಗಾಗಲೇ ಕೈಗೊಂಡಿರುವ ನೇಮಕಾತಿ ಪ್ರಕ್ರಿಯೆಯನ್ನು ನಿಯಮಾನುಸಾರ ಮುಂದುವರೆಸಲು ಕ್ರಮ ಕೈಗೊಳ್ಳುವಂತೆ ಸಹ ಸೂಚಿಸಲಾಗಿದೆ.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಖಾಲಿ ಇರುವ ಅರೆ ವೈದ್ಯಕೀಯ ಹುದ್ದೆಗಳನ್ನು ಭರ್ತಿ ಮಾಡಲು ದಿನಾಂಕ:01.09.2023ರಲ್ಲಿ ಸಲ್ಲಿಸಲಾಗಿದ್ದ ಪ್ರಸ್ತಾವನೆಯನ್ನು ಪರಿಶೀಲಿಸಿ ಆದೇಶ ಸಂಖ್ಯೆ: ಆಕುಕ 333 ಹೆಚ್‌ಎಸ್‌ಎಂ 2023, ದಿನಾಂಕ:21.12.2024ರಲ್ಲಿ 1205 ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿ ಹಾಗೂ 300 ಆರೋಗ್ಯ ನಿರೀಕ್ಷಣಾಧಿಕಾರಿಗಳ ಹುದ್ದೆಗಳನ್ನು ಭರ್ತಿ